ನಿ-72
ಕ್ರ-97 – ಕಂಪ್ಯೂಟರ್

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ ಶ್ರೀ ಪುಟ್ಟಣ್ಣ, ಶ್ರೀ ಮರಿತಿಬ್ಬೇಗೌಡ ಹಾಗೂ ಶ್ರೀ ಮೋಹನ ಕುಮಾರ್ ಕೊಂಡಜ್ಜಿ ಇವರುಗಳು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ <u>ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಹೇಳಿಕೆ</u>**

**<u>ಸೂಚನೆ</u>**

ಪದವಿ ಮತ್ತು ವಿಶ್ವವಿದ್ಯಾನಿಲಯಗಳಲ್ಲಿ ನೇಮಕಗೊಂಡಿರುವ ಅತಿಥಿ ಉಪನ್ಯಾಸಕರಿಗೆ ಉಂಟಾಗಿರುವ ತೊಂದರೆಗಳು ಮತ್ತು ಹಲವಾರು ವರ್ಷಗಳಿಂದ ನಿರಂತರವಾಗಿ ಕಾರ್ಯನಿರ್ವಹಿಸಿ, ಪ್ರಸಕ್ತ ಸಾಲಿನಲ್ಲಿ ಬೋಧಕರಿಗೆ ರಜೆ ಮತ್ತು ಇತರೆ ಸವಲತ್ತುಗಳನ್ನು ಒದಗಿಸದೆ ಇರುವುದು ಹಾಗೂ ಸೇವಾ ಭದ್ರತೆ ನೀಡದೆ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು.

**<u>ಹೇಳಿಕೆ</u>**

ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 88 ಡಿಸಿಇ 2003, ದಿನಾಂಕ:18-12-2003 ರಲ್ಲಿ ಖಾಯಂ ಉಪನ್ಯಾಸಕರಿಗೆ ನಿಗದಿತ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಕಾರ್ಯಭಾರವನ್ನು ನಿರ್ವಹಿಸಲು, ಅರೆಕಾಲಿಕ ಉಪನ್ಯಾಸಕರ ಬದಲಿಗೆ, ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲು ಅವಕಾಶ ಕಲ್ಪಿಸಲಾಗಿತ್ತು. ಖಾಯಂ ಉಪನ್ಯಾಸಕರಿಗೆ ವಾರಕ್ಕೆ 16/20 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿದ್ದು, ಅತಿಥಿ ಉಪನ್ಯಾಸಕರಿಗೆ ಅದರಲ್ಲಿ ಅರ್ಧದಷ್ಟು ಅಂದರೆ ಗರಿಷ್ಠ 8/10 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿತ್ತು. ಅತಿಥಿ ಉಪನ್ಯಾಸಕರಲ್ಲಿ ಯು.ಜಿ.ಸಿ. ವಿದ್ಯಾರ್ಹತೆ ಹೊಂದಿದವರಿಗೆ ರೂ.13,000/- ಹಾಗೂ ಯು.ಜಿ.ಸಿ. ವಿದ್ಯಾರ್ಹತೆ ಇಲ್ಲದವರಿಗೆ ರೂ.11,000/- ಗಳ ಗೌರವಧನವನ್ನು ನಿಗಧಿಪಡಿಸಲಾಗಿತ್ತು. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರು ಸೇವಾ ಸಕ್ರಮಾತಿ, ಗೌರವಧನ ಹೆಚ್ಚಳ ಮತ್ತಿತರೆ ಬೇಡಿಕೆಗಳನ್ನು ಈಡೇರಿಸುವಂತೆ ಕೋರಿ, ದಿನಾಂಕ:10.12.2021 ರಿಂದ ಮುಷ್ಕರ ನಡೆಸಿದ್ದರು.

ಈ ಹಿನ್ನೆಲೆಯಲ್ಲಿ ಅತಿಥಿ ಉಪನ್ಯಾಸಕರುಗಳ ಗೌರವಧನ ಹೆಚ್ಚಳ ಹಾಗೂ ಇತರೆ ಬೇಡಿಕೆಗಳಿಗೆ ಸಂಬಂಧಿಸಿದಂತೆ, ವಿವರವಾದ ಅಧ್ಯಯನ ನಡೆಸಿ, ವಿಸ್ತೃತ ವರದಿಯನ್ನು ಸಲ್ಲಿಸಲು ಸರ್ಕಾರವು ಉನ್ನತ ಮಟ್ಟದ ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿತ್ತು. ಉನ್ನತ ಮಟ್ಟದ ಅಧಿಕಾರಿಗಳ ಸಮಿತಿಯು, ಸರ್ಕಾರಕ್ಕೆ ವಿಸ್ತೃತ ವರದಿಯನ್ನು ಸಲ್ಲಿಸಿದ್ದು, ಸದರಿ ವರದಿಯನ್ನು ಪರಿಶೀಲಿಸಿ ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 ಹಾಗೂ ತಿದ್ದುಪಡಿ ಆದೇಶ ದಿನಾಂಕ:24.01.2022 ರಲ್ಲಿ ಅತಿಥಿ ಉಪನ್ಯಾಸಕರಿಗೆ ಪ್ರಸ್ತುತ ನೀಡಲಾಗುತ್ತಿರುವ ಗರಿಷ್ಠ 8/10 ಗಂಟೆಗಳ ಬದಲಾಗಿ, ಗರಿಷ್ಠ 15/19 ಗಂಟೆಗಳ ಕಾರ್ಯಭಾರವನ್ನು ನೀಡಿ, ಗೌರವಧನವನ್ನು ಈ ಕೆಳಗಿನಂತೆ ಹೆಚ್ಚಿಸಲಾಗಿದೆ.

ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/- (ಮೂವತ್ತೆರಡು ಸಾವಿರ ಮಾತ್ರ)

ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/- (ಮೂವತ್ತು ಸಾವಿರ ಮಾತ್ರ)

ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/- (ಇಪ್ಪತ್ತೆಂಟು ಸಾವಿರ ಮಾತ್ರ)

ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/- (ಇಪ್ಪತ್ತಾರು ಸಾವಿರ ಮಾತ್ರ)

2021-22ನೇ ಶೈಕ್ಷಣಿಕ ಸಾಲಿನಲ್ಲಿ ಗರಿಷ್ಠ 15/19 ಗಂಟೆಗಳ ಕಾರ್ಯಭಾರ ಹಾಗೂ ಭಾಗಶಃ ಲಭ್ಯವಾಗುವ ಕಾರ್ಯಭಾರಕ್ಕೆ ಅಗತ್ಯವಿರುವ ಅತಿಥಿ ಉಪನ್ಯಾಸಕರನ್ನು ಕೇಂದ್ರಿಕೃತ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ರಾಜ್ಯವ್ಯಾಪಿ ಮೆರಿಟ್/ಆಯ್ಕೆಪಟ್ಟಿ ಸಿದ್ಧಪಡಿಸಿ ನೇಮಿಸಿಕೊಳ್ಳಲಾಗಿದೆ. ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಯು.ಜಿ.ಸಿ. ವಿದ್ಯಾರ್ಹತೆ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವಾ ಅನುಭವ ಹೊಂದಿರುವವರಿಗೆ ಆದ್ಯತೆ ಮೇರೆಗೆ ಪರಿಗಣಿಸಲಾಗಿದೆ.

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಯು.ಜಿ.ಸಿ ನಿಯಮಾವಳಿಗಳು ಹಾಗೂ ಇಲಾಖೆಯ ವೃಂದ & ನೇಮಕಾತಿ ನಿಯಮಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಮಾತ್ರ ಅವಕಾಶವಿದ್ದು, ಕಾರ್ಯಭಾರವಿದ್ದಲ್ಲಿ ಅವಶ್ಯಕತೆಗನುಸಾರ ತಾತ್ಕಾಲಿಕ ವ್ಯವಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ, ರಜೆ ಹಾಗೂ ಸೌಲಭ್ಯಗಳನ್ನು ಕಲ್ಪಿಸಲು ನಿಯಮಗಳಲ್ಲಿ ಅವಕಾಶ ಇರುವುದಿಲ್ಲ.

ವಿಶ್ವವಿದ್ಯಾಲಯಗಳ ಹಂತದಲ್ಲಿ ಯುಜಿಸಿಯು ದಿನಾಂಕ:28.01.2019ರಂದು ಹೊರಡಿಸಿರುವ ಮಾರ್ಗಸೂಚಿಯನ್ವಯ ಪ್ರತಿ ಉಪನ್ಯಾಸಕ್ಕೆ ರೂ.1500/- ರಂತೆ ಪ್ರತಿ ತಿಂಗಳಿಗೆ ಗರಿಷ್ಠ ರೂ.50000/- ಮೀರದಂತೆ ಗೌರವಧನವನ್ನು ನಿಗಧಿಪಡಿಸಲು ಹಾಗೂ ಖಾಯಂ ಪ್ರಾಧ್ಯಾಪಕರುಗಳಿಗೆ ನೀಡುವ ಪಿಂಚಣಿ, ಗ್ರಾಚ್ಯೂಟಿ, ರಜೆ ಹಾಗೂ ಇನ್ನಿತರೇ ಸೌಲಭ್ಯಗಳನ್ನು ಅತಿಥಿ ಉಪನ್ಯಾಸಕರಿಗೆ ನೀಡಲು ಅವಕಾಶವಿರುವುದಿಲ್ಲ. ಅದರಂತೆ, ಸಾರ್ವಜನಿಕ ವಿಶ್ವವಿದ್ಯಾಲಯಗಳು ಅತಿಥಿ ಉಪನ್ಯಾಸಕರುಗಳಿಗೆ ಗೌರವಧನವನ್ನು ಯುಜಿಸಿ ಮಾರ್ಗಸೂಚಿಯನ್ವಯ ವಿದ್ಯಾರ್ಹತೆಯನ್ನು ಪರಿಗಣಿಸಿ ಆಯಾಯ ವಿಶ್ವವಿದ್ಯಾಲಯಗಳು ಅತಿಥಿ ಉಪನ್ಯಾಸಕರುಗಳಿಗೆ ಗೌರವಧನವನ್ನು, ವಿದ್ಯಾರ್ಹತೆ ಹಾಗೂ ಕಾರ್ಯಭಾರಕ್ಕನುಗುಣವಾಗಿ ಪಾವತಿಸುತ್ತಿರುತ್ತವೆ ಹಾಗೂ ಖಾಯಂ ಪ್ರಾಧ್ಯಾಪಕರುಗಳಿಗೆ ನೀಡುವ ಸೌಲಭ್ಯಗಳಾದ ರಜೆ ಹಾಗೂ ಇನ್ನಿತರೆ ಸೌಲಭ್ಯಗಳನ್ನು ಅತಿಥಿ ಉಪನ್ಯಾಸಕರಿಗೆ ನೀಡಲು ಅವಕಾಶವಿರುವುದಿಲ್ಲ.

ಇಡಿ 333 ಡಿಸಿಇ 2022

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ. ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

ನಿಯಮ-72
ಕ್ರ - 97 ಕಾರ್ಯಸೂಚಿ

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ ಶ್ರೀ ಪುಟ್ಟಣ್ಣ, ಶ್ರೀ ಮರಿತಿಬ್ಬೇಗೌಡ ಹಾಗೂ ಶ್ರೀ ಮೋಹನ ಕುಮಾರ್ ಕೊಂಡಜ್ಜಿ ಇವರುಗಳು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಹೇಳಿಕೆ**

**ಸೂಚನೆ**

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹಾಗೂ ವಿಶ್ವವಿದ್ಯಾಲಯಗಳಲ್ಲಿ 15, 20 ವರ್ಷಗಳಿಂದ ಅತಿಥಿ ಉಪನ್ಯಾಸಕರಾಗಿ ಸುಮಾರು 12000 ದಷ್ಟು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಸದರಿಯವರು ಬಹಳ ಕಡಿಮೆ ವೇತನದಲ್ಲಿ, ಸೇವಾ ಭದ್ರತೆ, ರಜೆ ಇನ್ನಿತರೆ ಯಾವುದೇ ಸೌಲಭ್ಯಗಳನ್ನು ನೀಡದೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಪ್ರತಿ ವರ್ಷ ಅತಿಥಿ ಉಪನ್ಯಾಸಕರನ್ನು ನೇಮಕಾತಿ ಮಾಡಿಕೊಳ್ಳುವಾಗ ಹಲವಾರು ಗೊಂದಲಗಳಾಗುತ್ತಿದ್ದು, ಕೆಲವರಿಗೆ ಉದ್ಯೋಗವಿಲ್ಲದೆ ನಿರುದ್ಯೋಗಿಗಳಾಗಿ ಬೀದಿ ಪಾಲಾಗುತ್ತಿದ್ದಾರೆ. ಅತಿಥಿ ಉಪನ್ಯಾಸಕರಲ್ಲಿ ಹಲವರಿಗೆ ಈಗಾಗಲೇ ವಯೋಮಿತಿ ಮೀರಿದ್ದು, ಬೇರೆ ಯಾವ ಸರ್ಕಾರಿ ಕೆಲಸಕ್ಕೆ ಸೇರಲು ಆಗುತ್ತಿಲ್ಲ. ಸರ್ಕಾರವು ನೀಡುತ್ತಿರುವ ವೇತನವು ಇವರ ಜೀವನ ನಡೆಸಲು ಸಾಧ್ಯವಾಗದಂತಹ ಪರಿಸ್ಥಿತಿ ಇದೆ. ಆದ್ದರಿಂದ ಸರ್ಕಾರಿ ಪದವಿ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ, ಕನಿಷ್ಠ ವೇತನ ಹಾಗೂ ಇನ್ನಿತರೆ ಸಮಸ್ಯೆಗಳನ್ನು ಬಗೆಹರಿಸುವ ಕುರಿತು.

**ಹೇಳಿಕೆ**

ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 88 ಡಿಸಿಇ 2003, ದಿನಾಂಕ:18-12-2003 ರಲ್ಲಿ ಖಾಯಂ ಉಪನ್ಯಾಸಕರಿಗೆ ನಿಗದಿತ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಕಾರ್ಯಭಾರವನ್ನು ನಿರ್ವಹಿಸಲು, ಅರೆಕಾಲಿಕ ಉಪನ್ಯಾಸಕರ ಬದಲಿಗೆ, ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲು ಅವಕಾಶ ಕಲ್ಪಿಸಲಾಗಿತ್ತು. ಖಾಯಂ ಉಪನ್ಯಾಸಕರಿಗೆ ವಾರಕ್ಕೆ 16/20 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿದ್ದು,. ಅತಿಥಿ ಉಪನ್ಯಾಸಕರಿಗೆ ಅದರಲ್ಲಿ ಅರ್ಧದಷ್ಟು ಅಂದರೆ ಗರಿಷ್ಠ 8/10 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿತ್ತು. ಅತಿಥಿ ಉಪನ್ಯಾಸಕರಲ್ಲಿ ಯು.ಜಿ.ಸಿ. ವಿದ್ಯಾರ್ಹತೆ ಹೊಂದಿದವರಿಗೆ ರೂ.13,000/- ಹಾಗೂ ಯು.ಜಿ.ಸಿ. ವಿದ್ಯಾರ್ಹತೆ ಇಲ್ಲದವರಿಗೆ ರೂ.11,000/- ಗಳ ಗೌರವಧನವನ್ನು ನಿಗಧಿಪಡಿಸಲಾಗಿತ್ತು. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರು ಸೇವಾ ಸಕ್ರಮಾತಿ, ಗೌರವಧನ ಹೆಚ್ಚಳ ಮತ್ತಿತರೆ ಬೇಡಿಕೆಗಳನ್ನು ಈಡೇರಿಸುವಂತೆ ಕೋರಿ, ದಿನಾಂಕ:10.12.2021 ರಿಂದ ಮುಷ್ಕರ ನಡೆಸಿದ್ದರು.

ಈ ಹಿನ್ನೆಲೆಯಲ್ಲಿ ಅತಿಥಿ ಉಪನ್ಯಾಸಕರುಗಳ ಗೌರವಧನ ಹೆಚ್ಚಳ ಹಾಗೂ ಇತರೆ ಬೇಡಿಕೆಗಳಿಗೆ ಸಂಬಂಧಿಸಿದಂತೆ, ವಿವರವಾದ ಅಧ್ಯಯನ ನಡೆಸಿ, ವಿಸ್ತೃತ ವರದಿಯನ್ನು ಸಲ್ಲಿಸಲು ಸರ್ಕಾರವು ಉನ್ನತ ಮಟ್ಟದ ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿತ್ತು. ಉನ್ನತ ಮಟ್ಟದ ಅಧಿಕಾರಿಗಳ ಸಮಿತಿಯು, ಸರ್ಕಾರಕ್ಕೆ ವಿಸ್ತೃತ ವರದಿಯನ್ನು ಸಲ್ಲಿಸಿದ್ದು, ಸದರಿ ವರದಿಯನ್ನು ಪರಿಶೀಲಿಸಿ ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 ಹಾಗೂ ತಿದ್ದುಪಡಿ ಆದೇಶ ದಿನಾಂಕ:24.01.2022 ರಲ್ಲಿ ಅತಿಥಿ ಉಪನ್ಯಾಸಕರಿಗೆ ಪ್ರಸ್ತುತ ನೀಡಲಾಗುತ್ತಿರುವ ಗರಿಷ್ಠ 8/10 ಗಂಟೆಗಳ ಬದಲಾಗಿ, ಗರಿಷ್ಠ15/19 ಗಂಟೆಗಳ ಕಾರ್ಯಭಾರವನ್ನು ನೀಡಿ, ಗೌರವಧನವನ್ನು ಈ ಕೆಳಗಿನಂತೆ ಹೆಚ್ಚಿಸಲಾಗಿದೆ.

ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/- (ಮೂವತ್ತೆರಡು ಸಾವಿರ ಮಾತ್ರ)

ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/- (ಮೂವತ್ತು ಸಾವಿರ ಮಾತ್ರ)

ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/- (ಇಪ್ಪತ್ತೆಂಟು ಸಾವಿರ ಮಾತ್ರ)

ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/- (ಇಪ್ಪತ್ತಾರು ಸಾವಿರ ಮಾತ್ರ)

2021-22ನೇ ಶೈಕ್ಷಣಿಕ ಸಾಲಿನಲ್ಲಿ ಗರಿಷ್ಠ 15/19 ಗಂಟೆಗಳ ಕಾರ್ಯಭಾರ ಹಾಗೂ ಭಾಗಶಃ ಲಭ್ಯವಾಗುವ ಕಾರ್ಯಭಾರಕ್ಕೆ ಅಗತ್ಯವಿರುವ ಅತಿಥಿ ಉಪನ್ಯಾಸಕರನ್ನು ಕೇಂದ್ರಿಕೃತ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ರಾಜ್ಯವ್ಯಾಪಿ ಮೆರಿಟ್/ಆಯ್ಕೆಪಟ್ಟಿ ಸಿದ್ಧಪಡಿಸಿ ನೇಮಿಸಿಕೊಳ್ಳಲಾಗಿದೆ. ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಯು.ಜಿ.ಸಿ. ವಿದ್ಯಾರ್ಹತೆ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವಾ ಅನುಭವ ಹೊಂದಿರುವವರಿಗೆ ಆದ್ಯತೆ ಮೇರೆಗೆ ಪರಿಗಣಿಸಲಾಗಿದೆ.

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಯು.ಜಿ.ಸಿ ನಿಯಮಾವಳಿಗಳು ಹಾಗೂ ಇಲಾಖೆಯ ವೃಂದ & ನೇಮಕಾತಿ ನಿಯಮಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಮಾತ್ರ ಅವಕಾಶವಿದ್ದು, ಕಾರ್ಯಭಾರವಿದ್ದಲ್ಲಿ ಅವಶ್ಯಕತೆಗನುಸಾರ ತಾತ್ಕಾಲಿಕ ವ್ಯವಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ, ರಜೆ ಹಾಗೂ ಸೌಲಭ್ಯಗಳನ್ನು ಕಲ್ಪಿಸಲು ನಿಯಮಗಳಲ್ಲಿ ಅವಕಾಶ ಇರುವುದಿಲ್ಲ.

ವಿಶ್ವವಿದ್ಯಾಲಯಗಳ ಹಂತದಲ್ಲಿ ಯುಜಿಸಿಯು ದಿನಾಂಕ:28.01.2019ರಂದು ಹೊರಡಿಸಿರುವ ಮಾರ್ಗಸೂಚಿಯನ್ವಯ ಪ್ರತಿ ಉಪನ್ಯಾಸಕ್ಕೆ ರೂ.1500/- ರಂತೆ ಪ್ರತಿ ತಿಂಗಳಿಗೆ ಗರಿಷ್ಠ ರೂ.50000/- ಮೀರದಂತೆ ಗೌರವಧನವನ್ನು ನಿಗಧಿಪಡಿಸಲು ಹಾಗೂ ಖಾಯಂ ಪ್ರಾಧ್ಯಾಪಕರುಗಳಿಗೆ ನೀಡುವ ಪಿಂಚಣಿ, ಗ್ರಾಚ್ಯೂಟಿ, ರಜೆ ಹಾಗೂ ಇನ್ನಿತರೇ ಸೌಲಭ್ಯಗಳನ್ನು ಅತಿಥಿ ಉಪನ್ಯಾಸಕರಿಗೆ ನೀಡಲು ಅವಕಾಶವಿರುವುದಿಲ್ಲ. ಅದರಂತೆ, ಸಾರ್ವಜನಿಕ ವಿಶ್ವವಿದ್ಯಾಲಯಗಳು ಅತಿಥಿ ಉಪನ್ಯಾಸಕರುಗಳಿಗೆ ಗೌರವಧನವನ್ನು ಯುಜಿಸಿ ಮಾರ್ಗಸೂಚಿಯನ್ವಯ ವಿದ್ಯಾರ್ಹತೆಯನ್ನು ಪರಿಗಣಿಸಿ ಆಯಾಯ ವಿಶ್ವವಿದ್ಯಾಲಯಗಳು ಅತಿಥಿ ಉಪನ್ಯಾಸಕರುಗಳಿಗೆ ಗೌರವಧನವನ್ನು, ವಿದ್ಯಾರ್ಹತೆ ಹಾಗೂ ಕಾರ್ಯಭಾರಕ್ಕನುಗುಣವಾಗಿ ಪಾವತಿಸುತ್ತಿರುತ್ತವೆ ಹಾಗೂ ಖಾಯಂ ಪ್ರಾಧ್ಯಾಪಕರುಗಳಿಗೆ ನೀಡುವ ಸೌಲಭ್ಯಗಳಾದ ರಜೆ ಹಾಗೂ ಇನ್ನಿತರೆ ಸೌಲಭ್ಯಗಳನ್ನು ಅತಿಥಿ ಉಪನ್ಯಾಸಕರಿಗೆ ನೀಡಲು ಅವಕಾಶವಿರುವುದಿಲ್ಲ.

ಇಡಿ 335 ಡಿಸಿಇ 2022

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ. ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು